# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ:1306:ಗ್ರಾಪಂಅ:2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:04-02-2019.

## ಸುತ್ತೋಲೆ

ವಿಷಯ: ಸಕಾಲ ಸೇವೆಗಳ ಅಧಿನಿಯಮದಡಿ ಅರ್ಜಿಗಳನ್ನು ನಿಗಧಿತ ಕಾಲಮಿತಿಯೊಳಗೆ ವಿಲೇಗೊಳಿಸುವ ಕುರಿತು.

ಉಲ್ಲೇಖ: ಅಪರ ಮಿಷನ್, ಸಕಾಲ ಮಿಷನ್, ಸಿಆಸುಇ(ಇ-ಆಡಳಿತ) ಇವರ ಪತ್ರ ಸಂಖ್ಯೆ:ಸಿಆಸುಇ 194 ನಾಸೇಖಾ 2017, ದಿನಾಂಕ:29-11-2018

******

ಸಕಾಲ ಸೇವೆಗಳ ಅಧಿನಿಯಮದಡಿ ಅರ್ಜಿಗಳನ್ನು ನಿಗದಿತ ಕಾಲಮಿತಿಯೊಳಗೆ ವಿಲೇವಾರಿಗೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಲ್ಲಿ ಅಪರ ಮಿಷನ್, ಸಕಾಲ ಮಿಷನ್, ಸಿಆಸುಇ(ಇ-ಆಡಳಿತ) ರವರು ಕೋರಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಸೂಚನೆಗಳನ್ನು ನೀಡಲಾಗಿದೆ.

1. ಸಕಾಲ ಸೇವೆಗಳ ಅಧಿನಿಯಮದಡಿ ಸ್ವೀಕರಿಸಿದಂತಹ ಅರ್ಜಿಗಳನ್ನು ಇತ್ಯರ್ಥಪಡಿಸಿ, ನಿಗದಿತ ಕಾಲಮಿತಿಯೊಳಗೆ ವಿಲೇಗೊಳಿಸಲು ಹೆಸರಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡುವುದು ಹಾಗೂ ಈ ಬಗ್ಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪರಿಶೀಲಿಸುವುದು.
2. 7 ಹಾಗೂ 7ಕ್ಕಿಂತ ಹೆಚ್ಚು ಪ್ರಕರಣಗಳಲ್ಲಿ ಅವಧಿ ಮೀರಿ ಅರ್ಜಿಗಳು ಇತ್ಯರ್ಥಗೊಳಿಸದೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಕೂಡಲೇ ಹೆಸರಿಸಿದ ಅಧಿಕಾರಿಗಳಿಗೆ ಕಾರಣ ಕೇಳುವ ನೋಟೀಸ್ ನೀಡಿ, ಕಾರಣಗಳು ಸಮರ್ಪಕವಾಗದೆ ಇರುವ ಸಂದರ್ಭದಲ್ಲಿ ಶಿಸ್ತಿನ ಕ್ರಮ ಜರುಗಿಸುವುದು.
3. ಸಕಾಲ ಸೇವೆಗಳ ಅಧಿನಿಯಮದಡಿ ಅವಧಿ ಮೀರಿ ಇತ್ಯರ್ಥಗೊಳಿಸದೆ ಬಾಕಿ ಉಳಿದಿರುವಂತಹ ಪ್ರಕರಣಗಳಲ್ಲಿ ಸೂಕ್ತ ಕ್ರಮ ಕೈಗೊಂಡು ಅರ್ಜಿಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಿ ವಿಲೇಗೊಳಿಸಲು ಹೆಸರಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನವನ್ನು ನೀಡುವುದು.

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.(ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಿಗೆ ಈ ಸುತ್ತೋಲೆಯ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ.)
3) ಗಣಕ ಕೋಶ ಶಾಖೆಗೆ.
4) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

ಪ್ರತಿ:

ಅಪರ ಮಿಷನ್ ನಿರ್ದೇಶಕರು, ಸಕಾಲ ಮಿಷನ್, ಸಿಆಸುಇ(ಇ-ಆಡಳಿತ).